# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 38 (123) |
| ಸದಸ್ಯರ ಹೆಸರು | : | ಶ್ರೀ ಎಫ್.ಹೆಚ್. ಜಕ್ಕಪ್ಪನವರ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 17-08-2026 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರು ಮಹಾನಗರ ಪಾಲಿಕೆಯು ಅತ್ತಾವರದಲ್ಲಿರುವ ಕುದ್ಮಲ್ ರಂಗರಾವ್ ಅವರ ಸ್ಮಾರಕ ನಿರ್ಮಾಣ ಮಾಡಲು ಮಂಜೂರು ಮಾಡಿದ ಹಣವೆಷ್ಟು; | ಮಂಗಳೂರು ಮಹಾನಗರಪಾಲಿಕೆಯ ವ್ಯಾಪ್ತಿಯಲ್ಲಿ 55ನೇ ಅತ್ತಾವರ ವಾರ್ಡಿನಲ್ಲಿ 'ಕುದ್ಮಲ್ ರಂಗಾರಾವ್" ಅವರ ಸಮಾಧಿ ಬಳಿ ಪ್ರವಾಸಿ ತಾಣ ಮತ್ತು ಸಮಗ್ರ ಅಭಿವದ್ಧಿ ಕಾಮಗಾರಿಯನ್ನು ಮಹಾತ್ಮಗಾಂದಿ ನಗರ ವಿಕಾಸ ಯೋಜನೆ-1 ರ ಕ್ರಿಯಾಯೋಜನೆಯಡಿ ಮೊತ್ತ ರೂ.300.00 ಲಕ್ಷಗಳಿಗೆ ಪಾಲಿಕೆ ವತಿಯಿಂದ ಮಂಜೂರಾಗಿರುತ್ತದೆ. ಅದರಂತೆ ಗುತ್ತಿಗೆದಾರರಿಗೆ ಕಾರ್ಯದೇಶವನ್ನು ದಿನಾಂಕ:06.10.2022ರಂದು ನೀಡಲಾಗಿದ್ದು, ಅನುದಾನ ಬಿಡುಗಡೆಯಾಗಿರುವುದಿಲ್ಲ. |
| ಆ) | ಸದರಿ ಕಾಮಗಾರಿ ಯಾವ ಹಂತದಲ್ಲಿದೆ? | ಮಂಗಳೂರು ಮಹಾನಗರ ಪಾಲಿಕೆಯು ಅತ್ತಾವರದಲ್ಲಿರುವ ಕುದ್ಮಲ್ ರಂಗರಾವ್ ಅವರ ಸ್ಮಾರಕ ನಿರ್ಮಾಣ ಕಾಮಗಾರಿಯು ಪ್ರಾರಂಭವಾಗಿರುವುದಿಲ್ಲ. ಮಂಗಳೂರು ಮಹಾನಗರ ಪಾಲಿಕೆಯ 2026-27ನೇ ಸಾಲಿನ ಆಯವ್ಯಯ ದಲ್ಲಿ ಕುದ್ಮಲ್ ರಂಗರಾವ್ ಅವರ ಸ್ಮಾರಕವನ್ನು ಅಭಿವೃದ್ಧಿ ಪಡಿಸುವ ಬಗ್ಗೆ ಪ್ರಸ್ತಾವನೆಯನ್ನು ಮಾಡಲಾಗಿರುತ್ತದೆ. ಅರಣ್ಯ ಇಲಾಖೆಯಿಂದ ಮರಗಳನ್ನು ಕಡಿಯುವ/ಸ್ಥಳಾಂತರಿಸುವ ಬಗ್ಗೆ ದಿನಾಂಕ:30.06.2026 ರಂದು ಮಹಜರು ಮಾಡಲಾಗಿದ್ದು, ಅರಣ್ಯ ಇಲಾಖೆಯಿಂದ ಅನುಮೋದನೆ ಪಡೆಯಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ:ನಅಇ 195 ಎಸ್‌ಎಫ್‌ಸಿ 2026

**(ಡಾ: ಯತೀಂದ್ರ ಸಿದ್ದರಾಮಯ್ಯ)**
ನಗರಾಭಿವೃದ್ಧಿ ಸಚಿವರು